# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/ /2021-22 ದಿನಾಂಕ : 03/01/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 03/01/2022 ರಂದು ನೋಡೆಲ್ ಅಧಿಕಾರಿ ರವರ ಅದ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಹಾಜರಿದ್ದ ಅಧಿಕಾರಿ /ನೌಕರರು

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಕೇಶವ ಪಾಣಿ, ಆರೋಗ್ಯಾಧಿಕಾರಿಗಳು
4. ಶ್ರೀ ರೇಣುಕಾ ಪ್ರಸಾದ್, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
5. ಶ್ರೀ ಮುತ್ತುರಾಜು, ಅರಣ್ಯ ಇಲಾಖೆ
6. ಶ್ರೀ ಗೋಪಿ, ತೆರಿಗೆ ವಸೂಲಿಗಾರರು
7. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು

ಹಾಜರಿದ್ದ ಸದಸ್ಯರು/ ಸಾರ್ವಜನಿಕರು

1. ಶ್ರೀ ಆಂತೋಣಿ ಕೆ, ಪ್ರಕೃತಿ ಲೇಔಟ್
2. ಶ್ರೀ ವಿನೋದ್, ಪ್ರಕೃತಿ ಲೇಔಟ್
3. ಶ್ರೀ ಮಾರಪ್ಪ, ಗಣೇಶ ಲೇಔಟ್
4. ಶ್ರೀ ಮೋಹನ್, ಸಿಂಗಾಪುರ
5. ಶ್ರೀ ಕಾರ್ತಿಕ್, ವರದರಾಜನಗರ
6. ಶ್ರೀ ಪ್ರಸನ್ನ ವೆಂಕಟೇಶ್,

ನೋಡೆಲ್ ಅಧಿಕಾರಿ:- ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ಗಣೇಶ ಬಡಾವಣೆಯಲ್ಲಿ ಕಾವೇರಿ ನೀರಿನ ಪೂರೈಕೆ ಸಮರ್ಪಕವಾಗಿಲ್ಲದೆ ಇರುವುದರಿಂದ ಅಲ್ಲಿನ ನಿವಾಸಿಗಳಿಗೆ ತುಂಬಾ ತೊಂದರೆ ಉಂಟಾಗುತ್ತಿದ್ದು, ಸಮರ್ಪಕವಾಗಿ ನೀರನ್ನು ಪೂರೈಸಲು, ಉದ್ಯಾನವನದಲ್ಲಿರುವ ಕೊಳವೆ ಬಾವಿಯ ಸ್ವಿಚ್ ಬೋರ್ಡ್ ದುರಸ್ಥಿಯಾಗಿರುವುದರಿಂದ ಸರಿಪಡಿಸಲು ಕೋರಿದರು ಹಾಗೂ ನಾಯಿಗಳ ಹಾವಳಿ ಜಾಸ್ತಿಯಾಗಿರುವುದರಿಂದ ಹಾವಳಿ ತಪ್ಪಿಸಲು ಸೂಕ್ತ ಕ್ರಮ ಕೈಗೊಳ್ಳಲು ಕೋರಿದರು.

ಕ್ರಮ: ನೋಡೆಲ್ ಅಧಿಕಾರಿಗಳು ಸಂಬಂಧ ಪಟ್ಟ ಇಲಾಖೆಗೆ ಕ್ರಮ ವಹಿಸಲು ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಸಿಂಹಾದ್ರಿ ಬಡಾವಣೆ ಹಾಗೂ ಪ್ರಕೃತಿ ಬಡಾವಣೆಯಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸುತ್ತಿರುವಾಗ ನೀರಿನ ಪೈಪ್ ಹಾಳಾಗಿದ್ದು, 1 ತಿಂಗಳಿನಿಂದ ಕಾವೇರಿ ನೀರು ಸರಬರಾಜಾಗದೆ ಇರುವುದರಿಂದ ಸ್ಥಳೀಯ ನಿವಾಸಿಗಳಿಗೆ ತುಂಬಾ ತೊಂದರೆ ಉಂಟಾಗುತ್ತಿದ್ದು, ಆದಷ್ಟು ಬೇಗ ದುರಸ್ಥಿಪಡಿಸಿ ನೀರನ್ನು ಸಮರ್ಪಕವಾಗಿ ಪೂರೈಸಲು ಕೋರಿದರು.

ಕ್ರಮ: ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಕ್ರಮ ವಹಿಸಲು ತಿಳಿಸಿದರು.

ಸಿಂಗಾಪುರ ವ್ಯಾಪ್ತಿಯಲ್ಲಿ ಒಣಗಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಹಾಗೂ ಬೀದಿ ದೀಪಗಳಿಗೆ ಟೈಮರ್ ಅಳವಡಿಸದೆ ಇರುವುದರಿಂದ ಹಗಲಿನ ಸಮಯದಲ್ಲೂ ಬೀದಿ ದೀಪಗಳು ಉರಿಯುತ್ತಿರುವುದರಿಂದ ಸಮರ್ಪಕವಾಗಿ ನಿರ್ವಹಣೆ ಮಾಡಲು ಕೋರಿದರು.

ಕ್ರಮ: ನೋಡೆಲ್ ಅಧಿಕಾರಿಗಳು ಉಪ ಅರಣ್ಯ ಸಂರಕ್ಷಣಾಧಿಕಾರಿ, ಬ್ಯಾಟರಾಯನಪುರ ರವರಿಗೆ ಕ್ರಮ ವಹಿಸಲು ತಿಳಿಸಿದರು.

ಕುವೆಂಪುನಗರ ವ್ಯಾಪ್ತಿಯಲ್ಲಿ ರಸ್ತೆ ಗುಂಡಿ ಮುಚ್ಚುವ ಕಾರ್ಯ ಪ್ರಗತಿಯಲ್ಲಿದ್ದು, ತ್ವರಿತವಾಗಿ ಬಾಕಿ ಇರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ನಿರ್ವಹಿಸಿ ವಾಹನ ಸವಾರರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಕೋರಿದರು.

ಕ್ರಮ: ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಕ್ರಮ ವಹಿಸಲು ತಿಳಿಸಿದರು.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.